ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಕೆ.ಆರ್.ವೃತ್ತ, ಬೆಂಗಳೂರು**

ಸಂಖ್ಯೆ: ಸಿ3(7)ನಿ.ಹು.ಕ.ಮು.01/2021-22 ದಿನಾಂಕ:15.11.2021

:: **ಜ್ಞಾಪನ** ::

ವಿಷಯ:- ಸರ್ಕಾರಿ ಪ್ರಾಥಮಿಕ/ಪ್ರೌಢಶಾಲಾ ಸಹಶಿಕ್ಷಕರು ಮತ್ತು ಮುಖ್ಯ ಶಿಕ್ಷಕರ ತತ್ಸಮಾನ ವೃಂದದ ನಿರ್ದಿಷ್ಟಪಡಿಸಿದ ಹುದ್ದೆಗಳಲ್ಲಿ (Specified Post) ಕರ್ತವ್ಯ ನಿರ್ವಹಿಸಿ ವರ್ಗಾವಣೆಯಾದವರಿಗೆ ಹೆಚ್ಚುವರಿ ಪ್ರಭಾರ ನೀಡಿ ನಿಯೋಜನೆ ಮೇಲೆ ಮುಂದುವರೆಸುವ ಬಗ್ಗೆ

ಉಲ್ಲೇಖ:- ಈ ಕಛೇರಿ ಅಧಿಸೂಚನೆ ಸಂಖ್ಯೆ: ಪ್ರಾ.ಪ್ರೌ.ಶಿ.ವರ್ಗ.ಕೋಶ.19-20 ಕ.ವಿಶೇ.ಷ.ಕೌ.ಅ.01/2021-22 ದಿನಾಂಕ:21.10.2021

-&&&-

ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಅಧಿಸೂಚನೆಯನ್ವಯ ಸರ್ಕಾರಿ ಪ್ರಾಥಮಿಕ/ಪ್ರೌಢಶಾಲಾ ಸಹಶಿಕ್ಷಕರು ಮತ್ತು ಮುಖ್ಯ ಶಿಕ್ಷಕರ ತತ್ಸಮಾನ ವೃಂದದ ನಿರ್ದಿಷ್ಟಪಡಿಸಿದ ಹುದ್ದೆಗಳಲ್ಲಿ (Specified Post) ಕರ್ತವ್ಯ ನಿರ್ವಹಿಸುತ್ತಿದ್ದು ಪ್ರಸ್ತುತ ಗರಿಷ್ಠ ಅವಧಿಯನ್ನು ಪೂರೈಸಿದ ಸಹಶಿಕ್ಷಕರು ಮತ್ತು ಮುಖ್ಯ ಶಿಕ್ಷಕರನ್ನು ಕೌನ್ಸಿಲಿಂಗ್ ಮೂಲಕ ಶಾಲೆಗಳಿಗೆ ಸ್ಥಳ ನಿಯುಕ್ತಿಗೊಳಿಸಲಾಗಿರುತ್ತದೆ.

ಮೇಲಿನ ಕ್ರಮದಿಂದ ಸಾಕಷ್ಟು ನಿರ್ದಿಷ್ಟಪಡಿಸಿದ ಹುದ್ದೆಗಳು ಖಾಲಿ ಉಳಿಯಲಿದ್ದು, ಇದರಿಂದ ಶೈಕ್ಷಣಿಕ ವ್ಯವಸ್ಥೆಯ ನಿರ್ವಹಣೆಗೆ ಅನಾನುಕೂಲ ಉಂಟಾಗುವುದನ್ನು ಪರಿಗಣಿಸಿ, ಸದರಿ ಖಾಲಿ ಹುದ್ದೆಗಳನ್ನು ಲಿಖಿತ ಪರೀಕ್ಷೆ ನಡೆಸುವ ಮೂಲಕ ಭರ್ತಿ ಮಾಡುವವರೆಗೆ ಮಾತ್ರ , ಪ್ರಸ್ತುತ ವರ್ಗಾವಣೆ ಕೌನ್ಸಿಲಿಂಗ್‌ನಲ್ಲಿ ಸ್ಥಳ ಆಯ್ಕೆ ಮಾಡಿಕೊಂಡವರನ್ನು ಶಾಲಾ ಕರ್ತವ್ಯದ ಮೇಲೆ ಹಾಜರುಪಡಿಸುವುದು. ನಂತರ ಸದರಿ ಖಾಲಿ ಉಳಿದಿರುವ ನಿರ್ದಿಷ್ಟ ಹುದ್ದೆಗಳ ತಾತ್ಕಾಲಿಕ ನಿರ್ವಹಣೆಗಾಗಿ ಸಮೀಪದ ಶಾಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರಿ ಪ್ರಾಥಮಿಕ/ಪ್ರೌಢಶಾಲಾ ಸಹಶಿಕ್ಷಕರು/ಮುಖ್ಯಶಿಕ್ಷಕರು ಯಾರಾದರು ಈ ಹಿಂದೆ ಸದರಿ ನಿರ್ದಿಷ್ಟ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸಿದ ಅನುಭವವಿದ್ದಲ್ಲಿ ಅವರನ್ನು ಅಥವಾ ಸಮೀಪದ ಶಾಲೆಗೆ ಸ್ಥಳನಿಯುಕ್ತಿಗೊಂಡ ಸದರಿ ಶಿಕ್ಷಕ/ಮುಖ್ಯ ಶಿಕ್ಷಕರನ್ನು ಮೂಲ ಶಾಲೆಯಲ್ಲಿನ ಕೆಲಸಕ್ಕೆ ತೊಂದರೆಯಾಗದಂತೆ ನಿರ್ದಿಷ್ಟಪಡಿಸಿದ ಹುದ್ದೆಗಳಲ್ಲಿ(Specified Post) ಹೆಚ್ಚುವರಿ ಪ್ರಭಾರದಲ್ಲಿ ತಾತ್ಕಾಲಿಕವಾಗಿ ನಿಯೋಜನೆ ಮೇರೆಗೆ ಯಾವುದೇ ಭತ್ಯೆಗಳಿಗೆ ಅವಕಾಶವಿಲ್ಲವೆಂಬ ಷರತ್ತಿಗೊಳಪಟ್ಟು ಮುಂದಿನ ಆದೇಶದವರೆಗೆ ಮುಂದುವರೆಸಲು ಅಗತ್ಯ ಕ್ರಮವಹಿಸಲು ಸೂಚಿಸಿದೆ.

R

**ಡಾ|| ವಿಶಾಲ್ ಆರ್,**
**ಆಯುಕ್ತರು,**
**ಸಾರ್ವಜನಿಕ ಶಿಕ್ಷಣ ಇಲಾಖೆ**

**ಇವರಿಗೆ:-**

1. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) ರವರಿಗೆ ಮುಂದಿನ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಪ್ರಾಂಶುಪಾಲರು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ(ಡಯಟ್) ರವರಿಗೆ,
3. ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಅಗತ್ಯ ಕ್ರಮಕ್ಕಾಗಿ.

**ಪ್ರತಿಯನ್ನು:-**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ) ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-1 ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.

2. ಆಪ್ತ ಕಾರ್ಯದರ್ಶಿಯವರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
3. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ ಬೆಂಗಳೂರು.
4. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲಬರ್ಗಾ.
5. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ .
6. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳವರಿಗೆ.
7. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ
8. ಜಂಟಿ ನಿರ್ದೇಶಕರು(ಆಡಳಿತ) ಆಯುಕ್ತರ ಕಛೇರಿ, ಸಾ.ಶಿ.ಇ ಬೆಂಗಳೂರು
9. ಸಹ ನಿರ್ದೇಶಕರು-1 ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
10. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಸಹನಿರ್ದೇಶಕರು ಹಾಗೂ ಪದನಿಮಿತ್ತ ವಿಭಾಗೀಯ ಕಾರ್ಯದರ್ಶಿಗಳು
11. ಸಹ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಕೆ.ಜಿ.ರಸ್ತೆ, ಬೆಂಗಳೂರು.
12. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳವರಿಗೆ.
13. ಆಯುಕ್ತರ ಆಪ್ತ ಕಾರ್ಯದರ್ಶಿಯವರಿಗೆ ಮಾಹಿತಿಗಾಗಿ.
14. ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ ಘಟಕ, ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು ಇವರಿಗೆ ಮುಂದಿನ ಕ್ರಮಕ್ಕಾಗಿ.
15. ಕಛೇರಿ ಪ್ರತಿ.